ನಗರ ಸಾರಿಗೆ ಸೇವೆ

1572(1969); ಶ್ರೀ ಚೆಲುವರಾಯಸ್ವಾಮಿ ಎನ್. (ನಾಗಮಂಗಲ)

ಅ) ಸರ್ಕಾರಿ ವಾಹನಗಳ ತಪಾಸಣಾ ಕಾರ್ಯಚರಣೆಯನ್ನು ನಡೆಸಲಾಗಿದೆಯೇ; ಎಷ್ಟು ಸರ್ಕಾರಿ ವಾಹನಗಳು, ಮಾಲಿನ್ಯ ತಪಾಸಣೆ, ತೆರಿಗೆ ಪಾವತಿ, ವಿಮಾಕಂತು ಪಾವತಿ ಪ್ರಮಾಣ ಪತ್ರಗಳನ್ನು ಹೊಂದದೇ ಇರುವುದು, ಚಾಲಕರ ಬಳಿ ಚಾಲನಾ ಪರವಾನಗಿ ಪತ್ರ ಇಲ್ಲದಿರುವುದು ಕಂಡು ಬಂದಿದೆ; ಈ ತಪಾಸಣೆಯನ್ನು ನಿಯಮಿತವಾಗಿ ನಡೆಸಲು ಸೂಕ್ತ ದಾಖಲೆಗಳನ್ನು ಹೊಂದಿಲ್ಲದ ಸರ್ಕಾರಿ ವಾಹನಗಳಿಗೆ ದಂಡ ವಿಧಿಸಲು ಕ್ರಮಕೈಗೊಳ್ಳಲಾಗುವುದೇ;

ಆ) ಸರ್ಕಾರಿ ವಾಹನಗಳು ಕೂಡಾ ಎಲ್ಲಾ ದಾಖಲೆಗಳನ್ನು ಕ್ರಮಬದ್ಧವಾಗಿ ನಿರ್ವಹಣೆ ಮಾಡಿಕೊಂಡು, ವಾಹನದ ಜೊತೆಯಲ್ಲಿಯೇ ಸದರಿ ದಾಖಲೆಗಳನ್ನು ಇಟ್ಟುಕೊಂಡು ಹೋಗುವ ಬಗ್ಗೆ ಒಂದು ಸುತ್ತೋಲೆಯನ್ನು ಹೊರಡಿಸಲು ಕ್ರಮ ಕೈಗೊಳ್ಳಲಾಗುವುದೇ; ವಾಹನ ದಾಖಲಾತಿಗಳು ಕ್ರಮಬದ್ಧವಾಗಿಲ್ಲದಿದ್ದಲ್ಲಿ, ಸಂಬಂಧಿಸಿದ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಹೌದು, ಸರ್ಕಾರಿ ವಾಹನಗಳನ್ನು ತಪಾಸಣೆ ನಡೆಸಲಾಗಿದೆ.

ಸರ್ಕಾರಿ ವಾಹನಗಳನ್ನು ಮಾಲಿನ್ಯ ನಿಯಂತ್ರಣ ಪ್ರಮಾಣ ಪತ್ರ, ತೆರಿಗೆ ಪತ್ರ, ವಿಮಾ ಪ್ರಮಾಣ ಪತ್ರ ಮತ್ತು ಚಾಲಕರ ಚಾಲನಾ ಅನುಜ್ಞಾ ಪತ್ರ ಇರುವ ಬಗ್ಗೆ ಬೆಂಗಳೂರು ವಿಭಾಗದಲ್ಲಿ ವಿಶೇಷ ತನಿಖಾ ತಂಡಗಳ ಮೂಲಕ ಒಟ್ಟು 206 ಸರ್ಕಾರಿ ವಾಹನಗಳನ್ನು ತಪಾಸಣೆ ಮಾಡಲಾಗಿದ್ದು, ಅವುಗಳಲ್ಲಿ 19 ವಾಹನಗಳ ಮೇಲೆ ಪ್ರಕರಣಗಳನ್ನು

ದಾಖಲಿಸಿ, ಒಟ್ಟು ರೂ. 37,390/–ಗಳ ರಾಜಿ ದಂಡವನ್ನು ವಸೂಲಿ ಮಾಡಲಾಗಿದೆ.

ಆ) ಮೋಟಾರು ವಾಹನ ಕಾಯ್ದೆ ಹಾಗೂ ಅದರಡಿ ರಚಿತವಾದ ನಿಯಮಾವಳಿಗಳ ಪ್ರಕಾರ ಯಾವುದೇ ವಾಹನವು ಸರ್ಕಾರಿ ವಾಹನಗಳು ಸೇರಿದಂತೆ ವಾಹನದ ಜೊತೆಯಲ್ಲಿಯೇ ಮಾಲಿನ್ಯ ನಿಯಂತ್ರಣ ಪ್ರಮಾಣ ಪತ್ರ, ತೆರಿಗೆ ಪಾವತಿ ಪತ್ರ, ವಿಮಾ ಪ್ರಮಾಣ ಪತ್ರ ಹಾಗೂ ಚಾಲಕರ ಬಳಿ ಚಾಲನಾ ಪರವಾನಿಗೆ ಪತ್ರಗಳನ್ನು ಕ್ರಮಬದ್ಧವಾಗಿ ಇಟ್ಟುಕೊಳ್ಳಬೇಕಾಗಿರುತ್ತದೆ. ಇದನ್ನು ಉಲ್ಲಂಘಿಸಿ ಸಂಚರಿಸುವ ವಾಹನಗಳ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ವೈದ್ಯರು ಹಾಗೂ ಶುಶ್ರೂಷಕಿಯರ ಕೊರತೆ

1574(1427); ಶ್ರೀ ಚಿಕ್ಕಮಾದು ಎಸ್. (ಹೆಚ್.ಡಿ. ಕೋಟೆ)

ಅ) ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ತಾಲ್ಲೂಕಿನಲ್ಲಿ ಸರ್ಕಾರದಿಂದ ಮಂಜೂರಾದ ವೈದ್ಯರು, ಶುಶ್ರೂಷಕಿ ಹಾಗೂ ವೈದ್ಯಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಆ) ಈ ತಾಲ್ಲೂಕಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು ಶುಶ್ರೂಷಕಿ ಹಾಗೂ ವೈದ್ಯಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು);

ಇ) ವೈದ್ಯರು ಹಾಗೂ ಅಧೀನ ಸಿಬ್ಬಂದಿಯ ಕೊರತೆಯಿಂದ ಉತ್ತಮ ಸೇವೆ ಒದಗಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ, ಸರ್ಕಾರ ಏನು ಕ್ರಮ ಕೈಗೊಂಡಿದೆ?